# ಕರ್ನಾಟಕ ಸರ್ಕಾರದ ನಡವಳಿ

ವಿಷಯ:- ಶಿಕ್ಷಕರಿಗೆ ವಿಶೇಷ ಭತ್ಯೆ - ಮುಂದುವರೆಸುವ ಬಗ್ಗೆ.

ಓದಲಾಗಿದೆ:- 1. ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 8 ಎಸ್‌ಆರ್‌ಪಿ 06 ದಿನಾಂಕ 29-3-2006
2. ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 14 ಎಸ್‌ಆರ್‌ಪಿ 06 ದಿನಾಂಕ 12-5-2006
3. ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 31 ಎಸ್‌ಆರ್‌ಪಿ 07 ದಿನಾಂಕ 28-8-2008

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ದಿನಾಂಕ 29-3-2006ರ ಸರ್ಕಾರಿ ಆದೇಶದಲ್ಲಿ 5ನೇ ರಾಜ್ಯ ವೇತನ ಆಯೋಗದ ಮಧ್ಯಂತರ ವರದಿಯಲ್ಲಿ ಮಾಡಿರುವ ಶಿಫಾರಸ್ಸಿನನ್ವಯ ಅನುದಾನಿತ ಮತ್ತು ಸ್ಥಳೀಯ ಸಂಸ್ಥೆಗಳ ಪ್ರಾಥಮಿಕ ಶಾಲಾ ಶಿಕ್ಷಕರು ಸೇರಿದಂತೆ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗಿತ್ತು.

ಮುಂದುವರೆದು, ಮೇಲೆ (2)ರಲ್ಲಿ ಓದಲಾದ ದಿನಾಂಕ 12-5-2006ರ ಸರ್ಕಾರಿ ಆದೇಶದಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಮತ್ತು ಸ್ಥಳೀಯ ಸಂಸ್ಥೆಗಳ ಪ್ರೌಢ ಶಾಲಾ ಶಿಕ್ಷಕರು ಸೇರಿದಂತೆ ರಾಜ್ಯ ಪ್ರೌಢ ಶಾಲಾ ಶಿಕ್ಷಕರಿಗೆ ಮತ್ತು ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ ಉಪನ್ಯಾಸಕರು ಸೇರಿದಂತೆ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗಿತ್ತು.

ಮೇಲೆ (3) ರಲ್ಲಿ ಓದಲಾದ ದಿನಾಂಕ 28-8-2008ರ ಸರ್ಕಾರಿ ಆದೇಶದಲ್ಲಿ 5ನೇ ರಾಜ್ಯ ವೇತನ ಆಯೋಗದ ಅಂತಿಮ ವರದಿಯಲ್ಲಿನ ಎರಡನೇ ಸಂಪುಟದಲ್ಲಿ ಮಾಡಿರುವ ಶಿಫಾರಸ್ಸಿನಂತೆ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ದಿನಾಂಕ 1-8-2008 ರಿಂದ ಜಾರಿಗೆ ಬರುವಂತೆ ರೂ.6250-12000 ಗಳ ಸಂವಾದಿ ವೇತನ ಶ್ರೇಣಿಗೆ ಬದಲಾಗಿ ರೂ.6800-13000 ಗಳ ವೇತನ ಶ್ರೇಣಿಯನ್ನು ಮಂಜೂರು ಮಾಡಲಾಗಿದೆ.

5ನೇ ರಾಜ್ಯ ವೇತನ ಆಯೋಗವು ಪ್ರಾಥಮಿಕ ಶಾಲಾ ಶಿಕ್ಷಕ ವರ್ಗದವರಿಗೆ ಮಂಜೂರು ಮಾಡಿರುವ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಮುಂದುವರೆಸದಿರಲು ಶಿಫಾರಸ್ಸು ಮಾಡಿರುತ್ತದೆ. ಆದರೆ, ಅದನ್ನು ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನವನ್ನು ನಿಗದಿಪಡಿಸಲು ಸೂಚಿಸಿರುವ ಸೂತ್ರದ ಒಂದು ಅಂಶವನ್ನಾಗಿ ಪರಿಗಣಿಸಲು ಶಿಫಾರಸ್ಸು ಮಾಡಿರುತ್ತದೆ.

ಮೇಲಿನ ಶಿಫಾರಸ್ಸುಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಶಿಕ್ಷಕರಿಗೆ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನವನ್ನು ನಿಗದಿಪಡಿಸಲು ಸೂಚಿಸಿರುವ ಸೂತ್ರದ ಒಂದು ಅಂಶವನ್ನಾಗಿ ಪರಿಗಣಿಸುವ ಬದಲಾಗಿ ಅದನ್ನು ಮುಂದುವರೆಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

## ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 31 ಎಸ್‌ಆರ್‌ಪಿ 2007,
## ಬೆಂಗಳೂರು, ದಿನಾಂಕ: 29ನೇ ಆಗಸ್ಟ್ 2008

ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಮಂಜೂರು ಮಾಡಿರುವ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು 2007ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನವನ್ನು ನಿಗದಿಪಡಿಸಲು ಸೂಚಿಸಿರುವ ಸೂತ್ರದ ಒಂದು ಅಂಶವಾಗಿ ಪರಿಗಣಿಸಲು 5ನೇ ರಾಜ್ಯ ವೇತನ ಆಯೋಗವು ಮಾಡಿರುವ ಶಿಫಾರಸ್ಸನ್ನು ಸರ್ಕಾರವು ಒಪ್ಪಿಕೊಂಡಿರುವುದಿಲ್ಲ. ಮುಂದುವರೆದು, ಸರ್ಕಾರವು ಕೆಳಕಂಡಂತೆ ಆದೇಶಿಸಲು ಹರ್ಷಿಸುತ್ತದೆ.

(i) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 31 ಎಸ್‌ಆರ್‌ಪಿ 2007 ದಿನಾಂಕ 28-8-2008 ರಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಹೆಚ್ಚಿನ ವೇತನ ಶ್ರೇಣಿ ರೂ.6800-13000 ನ್ನು ನೀಡಿರುವುದರಿಂದಾಗಿ ಅವರುಗಳು ರೂ.6250/-ಗಳ ಬದಲಾಗಿ ರೂ.6800/-ಗಳ

ಪ್ರಾರಂಭಿಕ ವೇತನಕ್ಕೆ ಅರ್ಹರಾಗುವುದರಿಂದ, ದಿನಾಂಕ 1-8-2008 ರಂದು ಅಥವಾ ನಂತರ ನೇಮಕಾತಿ ಹೊಂದಿದ ಪ್ರಾಥಮಿಕ ಶಾಲಾ ಶಿಕ್ಷಕರು ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 8 ಎಸ್‌ಆರ್‌ಪಿ 2006 ದಿನಾಂಕ 29-3-2006 ರಲ್ಲಿ ಮಂಜೂರು ಮಾಡಿರುವ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಪಡೆಯಲು ಅರ್ಹರಿರುವುದಿಲ್ಲ.

(ii) ದಿನಾಂಕ 1-8-2008ರ ಪೂರ್ವದಲ್ಲಿ ನೇಮಕಗೊಂಡಿರುವ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ದಿನಾಂಕ 29-3-2006ರ ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 8 ಎಸ್‌ಆರ್‌ಪಿ 06 ರಲ್ಲಿ ದಿನಾಂಕ 1-4-2006 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿರುವ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಮುಂದಿನ ಆದೇಶಗಳವರೆಗೆ ಮುಂದುವರೆಸತಕ್ಕದ್ದು.

(iii) ದಿನಾಂಕ 12-5-2006ರ ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 14 ಎಸ್‌ಆರ್‌ಪಿ 06 ರಲ್ಲಿ ಮಂಜೂರು ಮಾಡಿರುವ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಹಾಲಿ ಈ ಸೌಲಭ್ಯವನ್ನು ಪಡೆಯುತ್ತಿರುವ ಶಿಕ್ಷಕರುಗಳಿಗೆ ಮಾತ್ರ ಮುಂದಿನ ಆದೇಶಗಳವರೆಗೆ ಮುಂದುವರೆಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸುಂದರ ರಾಜ ಗುಪ್ತ)
ಸರ್ಕಾರದ ಉಪಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಇಲಾಖಾ ಮುಖ್ಯಾಧಿಕಾರಿಗಳು.
4. ಜಿಲ್ಲಾಧಿಕಾರಿಗಳು.
5. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
7. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
16. ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 500 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.
17. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
18. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, 5ನೇ ಮೈನ್, 4ನೇ ಕ್ರಾಸ್, ಗಾಂಧಿನಗರ, ಬೆಂಗಳೂರು-560 009.
19. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
20. ಹಾರಪತ್ರ.
21. ಶಾಖೆಯ ರಕ್ಷಾ ಕಡತ.

[ಕ್ರಮ ಸಂಖ್ಯೆ: 9, 10, 11, 12 ಮತ್ತು 13 ರಲ್ಲಿ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ.]